## ಕರ್ನಾಟಕ ವಿಧಾನ ಪರಿಷತ್

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1222 (1375)** |
| 2 | ಸದಸ್ಯರ ಹೆಸರು | : | ಶ್ರೀ ರಾಮೋಜಿಗೌಡ |
| 3 | ಉತ್ತರಿಸುವ ದಿನಾಂಕ | : | 22.08.2025 |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ 3 ವರ್ಷಗಳಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯ ಯಾವ ಯಾವ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ; ಇದಕ್ಕೆ ಬಿಡುಗಡೆಯಾಗಿರುವ ಅನುದಾನವೆಷ್ಟು; | ಕಳೆದ 3 ವರ್ಷಗಳಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಯ ಕಾಮಗಾರಿಗಳಿಗೆ ಅನುಮೋದನೆ ನೀಡಿ ಅನುದಾನ ಬಿಡುಗಡೆ ಮಾಡಿರುವ ಕಾಮಗಾರಿಗಳ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| (ಆ) | ಕಾಮಗಾರಿಗಳು ಪೂರ್ಣಗೊಂಡಿದೆಯೇ; ಬಾಕಿ ಇರುವ ಕಾಮಗಾರಿಗಳ ಪಟ್ಟಿ ನೀಡುವುದು; | ಮಂಜೂರಾತಿ ನೀಡಿದ ಒಟ್ಟು 466 ಕಾಮಗಾರಿಗಳಲ್ಲಿ 80 ಕಾಮಗಾರಿಗಳು ಪೂರ್ಣಗೊಂಡಿರುತ್ತದೆ. 172 ಕಾಮಗಾರಿಗಳು ಪ್ರಗತಿಯಲ್ಲಿದ್ದು, 4 ಕಾಮಗಾರಿಗಳ ಅಂದಾಜು ಪಟ್ಟಿಗಳು ಮಂಡಳಿಗೆ ಸ್ವೀಕೃತಗೊಂಡಿರುವುದಿಲ್ಲ. ಹೆಚ್ಚುವರಿಯಾಗಿ ಮಂಡಳಿ ಹಂತದಲ್ಲಿ ಅನುಮೋದನೆ ನೀಡಿದ್ದ 210 ಕಾಮಗಾರಿಗಳು ಪ್ರಾರಂಭವಾಗದಿರುವ ಪ್ರಯುಕ್ತ ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್ 101 ಪಿಟಿಪಿ 2023, ದಿನಾಂಕ:08.01.2024 ರಲ್ಲಿ ರದ್ದುಪಡಿಸಿ ಆದೇಶಿಸಲಾಗಿರುತ್ತದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| (ಇ) | ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಅನುದಾನವನ್ನು ಬಿಡುಗಡೆ ಮಾಡಲು ವಿಳಂಬ ಮಾಡುತ್ತಿರುವುದರಿಂದ ಸ್ಥಳೀಯ ಅಭಿವೃದ್ಧಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | -ಇಲ್ಲ-<br>ದಿನಾಂಕ:03.07.2024 ರಂದು ಮಾನ್ಯ ಯೋಜನಾ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಿರ್ಣಯದಂತೆ ಪ್ರತಿ ಕ್ಷೇತ್ರಕ್ಕೆ ನಿಗಧಿಯಾಗಿರುವ ರೂ.35.00 ಲಕ್ಷ ಅನುದಾನಗಳಿಗೆ ಮಾನ್ಯ ಶಾಸಕರ ಶಿಫಾರಸ್ಸು ಪತ್ರ ಆಧರಿಸಿ ಅನುದಾನ ಬಿಡುಗಡೆ ಮಾಡಲಾಗುತ್ತದೆ. |
| (ಈ) | ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆಯೇ? | -ಹೌದು-<br>ಅನುದಾನವನ್ನು ಕಾಮಗಾರಿಗಳ ಪ್ರಗತಿ ಆಧರಿಸಿ ಬಿಡುಗಡೆ ಮಾಡಲಾಗುತ್ತಿದೆ. |

**ಸಂಖ್ಯೆ: ಪಿಡಿಎಸ್ 64 ಪಿಟಿಪಿ 2025**

**(ಡಿ. ಸುಧಾಕರ್)**